**ದಿಃ 25.10.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ವಾದಿ ಪರ ವಕೀಲರಿಂದ;**

ನಾನು ಈ ದಾವೆಯಲ್ಲಿ ವಾದಿಯಾಗಿರುತ್ತೇನೆ. ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರ ಸಲ್ಲಿಸಿರುತ್ತೇನೆ ಸದರಿ ಪ್ರಮಾಣಪತ್ರದಲ್ಲಿ ಬರೆದಿರುವ ಸಂಗತಿಗಳು ನಿಜ ಇವೆ. ಸದರಿ ಪ್ರಮಾಣ ಪತ್ರವನ್ನು ಬರೆಯಲು ನಾನೇ ವಕೀಲರಿಗೆ ಮಾಹಿತಿ ನೀಡಿರುತ್ತೇನೆ ನಂತರ ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ದಾವಾ ಸ್ವತ್ತಿಗೆ ಸಂಬಂಬಧಿಸಿದ ಪಹಣಿಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ಅದನ್ನು ನಿಪಿ.1 ಎಂದು, ಭೀಮಪ್ಪ ರಾಮಪ್ಪ ಅಂತರಗಟ್ಟಿ ರವರ ಮರಣ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು, ಅದನ್ನು ಅದನ್ನು ನಿಪಿ.2 ಎಂದು, ದಿ. 03.05.2019 ರಂದು ಭೀಮಪ್ಪ ರಾಮಪ್ಪ ಅಂತರಗಟ್ಟಿ ರವರು ನನಗೆ ದಾವಾ ಸ್ವತ್ತಿನ ಕುರಿತು ಮಾಡಿಕೊಟ್ಟ ಖರೀದಿ ಕರಾರು ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.3ಎಂದು, ಅದರಲ್ಲಿರುವ ನನ್ನ ಸಹಿಯನ್ನು ನಿಪಿ.3(ಎ) ಎಂದು, ದಿ.21.07.2022 ರಂದು ನಾನು ನನ್ನ ವಕೀಲರ ಮೂಲಕ ಪ್ರತಿವಾದಿಯರಿಗೆ ಕಳುಹಿಸಿದ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.4 ಎಂದು, ನಿಪಿ.4 ರ ನೋಟೀಸು ಕಳುಹಿಸಿರುವ ಕುರಿತು 06 ಅಂಚೆ ರಸೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ.5 ರಿಂದ ದಿಪಿ.10 ಎಂದು, ನಿಪಿ.4 ರ ನೋಟೀಸು ಪ್ರತಿವಾದಿಯರಿಗೆ ಜಾರಿಯಾಗಿರುವ ಕುರಿತು 06 ಅಂಚೆ ತಲುಪೊಪ್ಪಿಗೆ ಪತ್ರವನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.11 ರಿಂದ ನಿಪಿ.16 ಎಂದು, ನಿಪಿ.4 ರ ನೋಟೀಸಿಗೆ ಪ್ರತಿವಾದಿಯರು ತಮ್ಮ ವಕೀಲರ ಮೂಲಕ ನಮ್ಮ

ವಕೀಲರಿಗೆ ದಿ. **25.08.2022** ರಂದು ಕಳುಹಿಸಿದ ಪ್ರತ್ಯುತ್ತರ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.17 ಎಂದು, ನಿಪಿ.17 ರ ನೋಟೀಸು ನಮ್ಮ ವಕೀಲರಿಗೆ ಜಾರಿಯಾಗಿರುವ ಕುರಿತು ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.17(ಎ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ

ಪ್ರತಿವಾದಿ ಪರ ವಕೀಲರು ಪಾಟೀ ಸವಾಲು ಮಾಡಲು ಸಮಯಾವಕಾಶ ಕೋರಿದ್ದು,

ಪಾಟೀ ಸವಾಲಿಗಾಗಿ ಮುಂದೂಡಲಾಯಿತು.

(ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೆ. ಕೇ. ಸರಿ ಇದೆ,

(ರಾಜೀವ ಗೋಳಸಾರ)
**ಪ್ರ.ದಿ.&ನ್ಯಾ.ದಂ., ಗೋಕಾಕ.**